# ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಾರ್ಯಾಲಯ, ಯಾದಗಿರಿ.

**ಅಧಿಸೂಚನೆ ಸಂಖ್ಯೆ : ಎಡಿಎಂಎನ್ / 1 / 2019, ದಿನಾಂಕ : 03 .01.2019.**

ವಿಷಯ : ಬೆರಳಚ್ಚುಗಾರ ಮತ್ತು ಬೆರಳಚ್ಚು - ನಕಲುಗಾರರ ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ : 1) ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರದ ಸಂಖ್ಯೆ : ಎಲ್‌ಸಿಎ – II 52 : 2010 ದಿನಾಂಕ : 30.04.2010 ವಿವಿಧ ಹುದ್ದೆಗಳನ್ನು ತುಂಬುವ ಅನುಮತಿಯ ಬಗ್ಗೆ.

2) ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರದ ಸಂಖ್ಯೆ : ಎಲ್‌ಸಿಎ – II 52 : 2010 ದಿನಾಂಕ : 03.02.2011 ವಿವಿಧ ಹುದ್ದೆಗಳನ್ನು ತುಂಬುವ ಅನುಮತಿಯ ಬಗ್ಗೆ.

3) ಸರಕಾರಿ ಆದೇಶ ಸಂಖ್ಯೆ ಲಾ 153 ಎಲ್‌ಎಸಿ - 2010 ದಿನಾಂಕ : 24.01.2010 ಖಾಲಿ ಇರುವ 30 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮಂಜೂರಾತಿ ನೀಡುವ ಕುರಿತು.

4) ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರದ ಸಂಖ್ಯೆ : ಎಲ್‌ಸಿಎ – II 54 : 2011 ದಿನಾಂಕ : 01.10.2011 ವಿವಿಧ ಹುದ್ದೆಗಳನ್ನು ತುಂಬುವ ಅನುಮತಿಯ ಬಗ್ಗೆ.

5) ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ( ನೇಮಕಾತಿ ) ನಿಯಮ 1982.

6) ಕರ್ನಾಟಕ ಅಧೀನ ನ್ಯಾಯಾಲಯಗಳ ( ಲಿಪಿಕ ಮತ್ತು ಇತರ ಹುದ್ದೆಗಳು) ( ನೇಮಕಾತಿ ) ( ತಿದ್ದುಪಡಿ ) ನಿಯಮ 2007.

7) ಕರ್ನಾಟಕ ನಾಗರಿಕ ಸೇವಾ ಸಾಮಾನ್ಯ ನೇಮಕಾತಿ ನಿಯಮ – 1977.

8) ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರದ ಸಂಖ್ಯೆ : ಎಲ್‌ಸಿಎ – II 19 : 2015 ದಿನಾಂಕ : 07.11.2015 ಅಧಿಸೂಚನೆ ಸಂಖ್ಯೆ : 3 / 2012, ದಿನಾಂಕ : 08.08.2012ನ್ನು ರದ್ದುಗೊಳಿಸಿ ಹೊಸ ಅಧಿಸೂಚನೆ ಹೊರಡಿಸಲು ಅನುಮತಿ ನೀಡಿದ ಬಗ್ಗೆ.

9) ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರದ ಸಂಖ್ಯೆ : ಎಲ್‌ಸಿಎ – II 128 : 2012 ದಿನಾಂಕ : 13.02.2017.

10) ಕಚೇರಿ ಟಿಪ್ಪಣಿ ದಿ : 03.01.2019 - ಮಾಡಿದ ಆದೇಶ.

*****

ಮೇಲ್ಕಂಡ ಅಧಿಸೂಚನೆಯನ್ವಯ ಯಾದಗಿರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ **ಬೆರಳಚ್ಚುಗಾರರು - 08 ಮತ್ತು ಬೆರಳಚ್ಚು - ನಕಲುಗಾರರು – 05** ಹುದ್ದೆಗಳನ್ನು ತುಂಬಲು ಅರ್ಹ ಅಭ್ಯರ್ಥಿಗಳಿಂದ ಅಧಿಸೂಚನೆಯಲ್ಲಿ ಲಗತ್ತಿಸಿರುವ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **15.02.2019** ಸಂಜೆ **5.00** ಗಂಟೆಯೊಳಗೆ.

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಸಂಬಂಧಿತ ಹುದ್ದೆಯ ಲಕೋಟೆಯ ಮೇಲೆ ಕಡ್ಡಾಯವಾಗಿ ತಾವು ಸಲ್ಲಿಸಬೈಸುವ ಹುದ್ದೆಯ ಹೆಸರನ್ನು ದಪ್ಪ ಅಕ್ಷರಗಳಲ್ಲಿ ತಪ್ಪದೇ ನಮೂದಿಸಬೇಕು.

## I. ಬೆರಳಚ್ಚುಗಾರರು

**ಹುದ್ದೆಗಳ ಸಂಖ್ಯೆ : 06**

**ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು.**

**ಹುದ್ದೆಯ ವರ್ಗೀಕರಣ : ಹೈದ್ರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ ( Hyderabad - Karnataka Local Cadre )**

| ವರ್ಗೀಕರಣ | ಇತರರು | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಒಟ್ಟು ಹುದ್ದೆಗಳು |
|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 01 | 02 | -- | -- | 03 |
| ಪ್ರವರ್ಗ - 2ಎ | -- | 01 | -- | -- | 01 |
| ಪರಿಶಿಷ್ಟ ಜಾತಿ | -- | -- | 01 | -- | 01 |
| ಪ್ರವರ್ಗ - 3ಎ | 01 | -- | -- | -- | 01 |
| ಒಟ್ಟು | **02** | **03** | **01** | -- | **06** |

**ಹುದ್ದೆಯ ಉಳಿಕ ಮೂಲ ವೃಂದದ ಹುದ್ದೆಗಳಿಗೆ ಸ್ಥಳಿಯೇತರ ಅಭ್ಯರ್ಥಿಗಳಿಗೆ ಗುರುತಿಸಿರುವ ಮೀಸಲಾತಿ**

**(Residual Parent Cadre : 02)**

| ವರ್ಗೀಕರಣ | ಇತರರು | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಒಟ್ಟು ಹುದ್ದೆಗಳು |
|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 01 | -- | -- | -- | 01 |
| ಪರಿಶಿಷ್ಟ ಪಂಗಡ | 01 | -- | -- | -- | 01 |
| ಒಟ್ಟು | 02 | -- | -- | -- | **02** |

**ವಿದ್ಯಾರ್ಹತೆ :**

1) ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
2) ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಬೆರಳಚ್ಚು ಪ್ರೌಢದರ್ಜೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು

**ಆಯ್ಕೆಯ ವಿಧಾನ :**

ಕರ್ನಾಟಕ ಅಧೀನ ನ್ಯಾಯಾಲಯಗಳು ( ಮಿನಿಸ್ಟ್ರಿಯಲ್ ಮತ್ತು ಇತರ ಹುದ್ದೆಗಳು ) ( ನೇಮಕಾತಿ ) ನಿಯಮಗಳು - 1982 ಮತ್ತು ( ತಿದ್ದುಪಡಿ ) ನಿಯಮಗಳು - 2007ರನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಪಡೆದಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಕಂಪ್ಯೂಟರ್‌ನಲ್ಲಿ ಅಥವಾ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚು ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆಯುವ ಅಂಕಗಳು ಮತ್ತು ಸಂದರ್ಶನದಲ್ಲಿ ಪಡೆಯುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :** ಸಾಮರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ. ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡುವ ಜ್ಞಾನವು ಅವಶ್ಯವಾಗಿರುತ್ತದೆ.

ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮದಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ :**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಧಿಸೂಚನೆ ಸಂ : DPAR/59/SCR /2012, ಬೆಂಗಳೂರು, ದಿ : 06.08.2012ರಂತೆ ನಿಗದಿಪಡಿಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಆಯ್ಕೆಯಾದ ಪರಿವೀಕ್ಷಣಾ ಅವಧಿಯಲ್ಲಿ ಉತ್ತೀರ್ಣವಾಗತಕ್ಕದ್ದು ಇಲ್ಲವಾದಲ್ಲಿ ಅವರ ಪರಿವೀಕ್ಷಣಾ ಅವಧಿಯನ್ನು ಘೋಷಿಸುವುದಿಲ್ಲ.

## II. ಬೆರಳಚ್ಚು - ನಕಲುಗಾರರ ಹುದ್ದೆ

**1. ಹುದ್ದೆಗಳ ಸಂಖ್ಯೆ : 05**

**ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು.**

**ಹುದ್ದೆಯ ವರ್ಗೀಕರಣ : ಹೈದ್ರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ ( Hyderabad - Karnataka Local Cadre )**

| ವರ್ಗೀಕರಣ | ಇತರರು | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಒಟ್ಟು ಹುದ್ದೆಗಳು |
|---|---|---|---|---|---|
| ಪ್ರವರ್ಗ - 1 | 01 | -- | -- | -- | 01 |
| ಪ್ರವರ್ಗ - 2ಎ | 01 | -- | -- | -- | 01 |
| ಸಾಮಾನ್ಯ ಅಭ್ಯರ್ಥಿ | -- | 01 | -- | 01 | 02 |
| ಪರಿಶಿಷ್ಟ ಜಾತಿ | -- | 01 | -- | -- | 01 |
| ಒಟ್ಟು | **02** | **02** | -- | **01** | **05** |

**ವಿದ್ಯಾರ್ಹತೆ :**

1) ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

2) ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಬೆರಳಚ್ಚು ಕಿರಿಯ ದರ್ಜೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

**ಆಯ್ಕೆಯ ವಿಧಾನ :**

ಕರ್ನಾಟಕ ಅಧೀನ ನ್ಯಾಯಾಲಯಗಳು ( ಮಿನಿಸ್ಟ್ರಿಯಲ್ ಮತ್ತು ಇತರ ಹುದ್ದೆಗಳು ) ( ನೇಮಕಾತಿ ) ನಿಯಮಗಳು - 1982 ಮತ್ತು ( ತಿದ್ದುಪಡಿ ) ನಿಯಮಗಳು - 2007ರನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಪಡೆದಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಕಂಪ್ಯೂಟರ್‌ನಲ್ಲಿ ಅಥವಾ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚು ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆಯುವ ಅಂಕಗಳು ಮತ್ತು ಸಂದರ್ಶನದಲ್ಲಿ ಪಡೆಯುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :** ಸಾಮರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ. ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡುವ ಜ್ಞಾನವು ಅವಶ್ಯವಾಗಿರುತ್ತದೆ.

ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮದಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ :**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಧಿಸೂಚನೆ ಸಂ : DPAR/59/SCR /2012, ಬೆಂಗಳೂರು, ದಿ : 06.08.2012ರಂತೆ ನಿಗದಿಪಡಿಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಆಯ್ಕೆಯಾದ ಪರಿವೀಕ್ಷಣಾ ಅವಧಿಯಲ್ಲಿ ಉತ್ತೀರ್ಣವಾಗತಕ್ಕದ್ದು ಇಲ್ಲವಾದಲ್ಲಿ ಅವರ ಪರಿವೀಕ್ಷಣಾ ಅವಧಿಯನ್ನು ಘೋಷಿಸುವುದಿಲ್ಲ.

**ಸೂಚನೆಗಳು :**

1) ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ : **15.02.2019** ರಂದು ಸಂಜೆ **5-00** ಗಂಟೆಯೊಳಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಕಡೆಯ ದಿನಾಂಕವು ಸಾರ್ವಜನಿಕ ರಜೆ ದಿನವಾಗಿದ್ದ ಪಕ್ಷದಲ್ಲಿ ಮುಂದಿನ ಕೆಲಸದ ದಿನಾಂಕ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನವಾಗಿರುತ್ತದೆ.

2) ಭರ್ತಿ ಮಾಡಿದ ಅರ್ಜಿಗಳನ್ನು ಈ ಕೆಳಕಂಡ ವಿಳಾಸಕ್ಕೆ ಸಲ್ಲಿಸಬೇಕು.

**ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ**
**ಕಚೇರಿ, ಯಾದಗಿರಿ, ಜಿಲ್ಲೆ : ಯಾದಗಿರಿ.**

**i) ವಯೋಮಿತಿ ( ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಅನುಗುಣವಾಗಿ ) :**

| | | | | |
|---|---|---|---|---|
| **ಕನಿಷ್ಠ ವಯೋಮಿತಿ** | : | 18 ವರ್ಷ ತುಂಬಿರಬೇಕು.ಸಿ | | |
| **ಗರಿಷ್ಠ ವಯೋಮಿತಿ** | : | ಸಾಮಾನ್ಯ ವರ್ಗ | - | 35 ವರ್ಷ |
| | | 2ಎ/2ಬಿ/3ಎ/3ಬಿ | - | 38 ವರ್ಷ |
| | | ಪ.ಜಾ/ಪ.ಪಂ/ಪ್ರ.ವರ್ಗ-1 | - | 40 ವರ್ಷ |

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**ಸರ್ಕಾರ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ :**

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯದಲ್ಲಿ ಸಂಬಂಧಪಟ್ಟ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿರಬೇಕು.

**ii) ಮೀಸಲಾತಿ ಹಾಗೂ ವಯೋಮಿತಿ ರಿಯಾಯತಿ ಕೋರಿದಲ್ಲಿ ಹಾಜರುಪಡಿಸಬೇಕಾದ ಸ್ವಯಂ ದೃಢೀಕೃತ ಪ್ರಮಾಣಪತ್ರಗಳು.**

1) ಜಾತಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಯಲ್ಲಿ ತಹಶೀಲ್ದಾರರಿಂದ ಪಡೆದಿರುವ ಜಾತಿ ಪ್ರಮಾಣಪತ್ರವನ್ನು ಒದಗಿಸತಕ್ಕದ್ದು.

2) ಗ್ರಾಮೀಣ ಮೀಸಲಾತಿ ಕೋರುವ ವರ್ಗದ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ / 96 / ಸೇನನಿ / 2005 ದಿನಾಂಕ : 10.08.2005ರ ಪ್ರಕಾರ ನಿಗದಿತ ನಮೂನೆ 2ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ರುಜು ಮಾಡಿಸಿ ಸಲ್ಲಿಸಬೇಕು.

3) ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣಪತ್ರ ನಮೂನೆ - 2ರ ಜೊತೆ ನಮೂನೆ – 1ರಲ್ಲೂ ದೃಢೀಕರಣ ಪತ್ರವನ್ನು ಸಲ್ಲಿಸುವುದು.

**ಪರಿವೀಕ್ಷಣಾ ಅವಧಿ :**

ಆಯ್ಕೆಯಾದ ಅಭ್ಯರ್ಥಿಗಳಿಗೆ ಕರ್ನಾಟಕ ಸೇವಾ ನಿಯಮ ( ಪರಿವೀಕ್ಷಣಾ ನಿಯಮಗಳು ) – 1977ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿ ಇರುತ್ತದೆ. ಆ ಅವಧಿಯಲ್ಲಿ ಅಭ್ಯರ್ಥಿಗಳು ಅವರ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳನ್ನು ಮತ್ತು ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು.

**ಅಭ್ಯರ್ಥಿಗಳು ಅರ್ಜಿಯೊಂದಿಗೆ ಕೆಳಕಂಡ ದಾಖಲೆಗಳ ದೃಢೀಕೃತ ನಕಲುಗಳನ್ನು ಸಲ್ಲಿಸಬೇಕು. ತಪ್ಪಿದಲ್ಲಿ ಯಾವ ಸೂಚನೆಯನ್ನು ನೀಡದೇ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

1) ಅಭ್ಯರ್ಥಿಯು ಈ ಅಧಿಸೂಚನೆಯಲ್ಲಿ ನೀಡಿರುವ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಬೆರಳಚ್ಚು ಮಾಡಿಸಿ ಕಂಪ್ಯೂಟರ್‌ನಲ್ಲಿ ತಯಾರಿಸಿ ಅಥವಾ ಸ್ವತಃ ಕೈಬರಹದಲ್ಲಿ ತಮಗೆ ಅನ್ವಯಿಸುವ ಎಲ್ಲ ಅಂಕಣಗಳನ್ನು ಭರ್ತಿ ಮಾಡಿ ಸಲ್ಲಿಸತಕ್ಕದ್ದು.

2) ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ನಮೂನೆಗಳಲ್ಲಿ ಅರ್ಜಿಯನ್ನು ಸಲ್ಲಿಸತಕ್ಕದ್ದು.

3) ಹುಟ್ಟಿದ ದಿನಾಂಕವನ್ನು ತೋರಿಸುವ ಬಗ್ಗೆ ದೃಢೀಕೃತ ಪ್ರಮಾಣಪತ್ರವನ್ನು ಸಲ್ಲಿಸತಕ್ಕದ್ದು.

4) ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಸ್ಥಳದಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು.

5) ಅರ್ಜಿ ನಮೂನೆಯೊಂದಿಗೆ ಯಾವುದೇ ಮೂಲ ಪ್ರತಿಗಳನ್ನು ಲಗತ್ತಿಸುವ ಅವಶ್ಯಕತೆ ಇರುವುದಿಲ್ಲ. ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರ ಪ್ರಮಾಣಪತ್ರಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಗೆ ಲಗತ್ತಿಸತಕ್ಕದ್ದು.

6) ಅಭ್ಯರ್ಥಿಗಳು ಅರ್ಜಿಯೊಂದಿಗೆ ಅವರ ನಡತೆ ಬಗ್ಗೆ ಅವರ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ 6 ತಿಂಗಳೊಳಗೆ ಪಡೆದ ಎರಡು ಪ್ರಮಾಣ ಪತ್ರಗಳನ್ನು ಹಾಗೂ ಕೊನೆಯಲ್ಲಿ ವ್ಯಾಸಂಗ ಮಾಡಿದ ಶಾಲೆ /ಕಾಲೇಜಿನಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

7) ಜಾತಿ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ತಹಶೀಲ್ದಾರರವರಿಂದ ಚಾಲ್ತಿಯಲ್ಲಿರುವ ನಿಯಮಾನುಸಾರ ಪಡೆದಿರುವ ಪ್ರಮಾಣಪತ್ರದ ದೃಢೀಕೃತ ನಕಲನ್ನು ಲಗತ್ತಿಸತಕ್ಕದ್ದು.

8) ಅಭ್ಯರ್ಥಿಗಳು ಅರ್ಜಿಯ ಜೊತೆಯಲ್ಲಿ 5-00 ರೂ.ಗಳ ಅಂಚೆ ಚೀಟಿ ಲಗತ್ತಿಸಿರುವ ಸ್ವವಿಳಾಸವಿರುವ ಲಕೋಟೆಯನ್ನು ಲಗತ್ತಿಸತಕ್ಕದ್ದು ಹಾಗೂ ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರದಲ್ಲಿ ಲಕೋಟೆಯ ಮೇಲೆ ನಮೂದಿಸತಕ್ಕದ್ದು.

9) ಯಾವುದೇ ಅಭ್ಯರ್ಥಿಯು ಯಾವುದೇ ಪ್ರವರ್ಗ ಮೀಸಲಾತಿ ಕೋರಿದಲ್ಲಿ ಆಯಾ ಮೀಸಲಾತಿಗೆ ಸಂಬಂಧಿಸಿದ ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರದ ದಢೀಕೃತ ನಕಲನ್ನು ಲಗತ್ತಿಸತಕ್ಕದ್ದು.

10) ಹೈದ್ರಾಬಾದ್ - ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ ಅರ್ಜಿ ಸಲ್ಲಿಸುವವರು ಸರ್ಕಾರದ ಅಧಿಸೂಚನೆ ಸಂಖ್ಯೆ : DPAR/43/HKC/2013 ಬೆಂಗಳೂರು, ದಿ : 29.01.2014ರಲ್ಲಿ ನಿಗದಿಪಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ ( ಹೈದ್ರಾಬಾದ್ - ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ( ಮೀಸಲಾತಿ ) ( ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ ) ನಿಯಮಗಳು - 2013ರ ನಿಯಮ 3(3)ರಲ್ಲಿ ಗೊತ್ತುಪಡಿಸಿರುವಂತೆ " ಅನುಬಂಧ -ಎ "ಯಲ್ಲಿರುವಂತೆ " ಅರ್ಹತಾ ಪ್ರಮಾಣ ಪತ್ರ "ವನ್ನು ಸಂಬಂಧಪಟ್ಟ ಸಹಾಯಕ ಆಯುಕ್ತರವರಿಂದ ಹಾಗೂ ಸೇವಾನಿರತ ಅಭ್ಯರ್ಥಿಗಳು ಸ್ವಗ್ರಾಮ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅಧಿಸೂಚನೆಯ ಕೊನೆಯ ದಿನಾಂಕದೊಳಗಾಗಿ ಪಡೆದಿರಬೇಕು.

## ಸಾಮಾನ್ಯ ಸೂಚನೆಗಳು :

1) ಅಭ್ಯರ್ಥಿಗಳು ನೇಮಕಾತಿಗೆ ಸಂಬಂಧಿಸಿದಂತೆ ಯಾವುದೇ ಅಕ್ರಮ ಮತ್ತು ಅನುಸೂಚಿತ ಮಾರ್ಗವನ್ನು ಅನುಸರಿಸಿದ್ದಲ್ಲಿ ಅಥವಾ ಪ್ರಭಾರ ಬೀರುವ ಅಂಶ ಕಂಡು ಬಂದಲ್ಲಿ ಅಂತ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವದಿಲ್ಲ.

2) ಅಪೂರ್ಣವಾಗಿರುವ, ಸಹಿ ಮಾಡದ ಮತ್ತು ವಿದ್ಯಾರ್ಹತೆ ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿಯ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3) ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಸೂಕ್ತ ಮಾರ್ಗದ ಮುಖಾಂತರ ಸಲ್ಲಿಸತಕ್ಕದ್ದು.

4) ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗುವುದು ಹಾಗೂ ಸಂಬಂಧಪಟ್ಟ ಎಲ್ಲಾ ಮೂಲ ದಾಖಲೆಗಳನ್ನು ಸಂದರ್ಶನದ ಕಾಲಕ್ಕೆ ಹಾಜರುಪಡಿಸತಕ್ಕದ್ದು.

5) ಅಭ್ಯರ್ಥಿಯು ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಅನರ್ಹರೆಂದು ತಿಳಿಯತಕ್ಕದ್ದು ಹಾಗೂ ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸಲಾಗುವದಿಲ್ಲ.

6) ಎಲ್ಲಾ ವಿವರಗಳನ್ನು ನೀಡದ ಹಾಗೂ ಅಪೂರ್ಣವಾದ ಅರ್ಜಿಗಳನ್ನು ಪ್ರಾರಂಭಿಕ ಹಂತದಲ್ಲೇ ತಿರಸ್ಕರಿಸಲಾಗುವುದು.

7) ಅಧಿಸೂಚನೆಯನ್ನು https://districts.ecourts.gov.in/yadgir ಅಂತರ್ಜಾಲದಲ್ಲಿ ನೋಡಬಹುದು.

( ರಾಚಪ್ಪ ಕೆ ತಾಳಿಕೋಟೆ )
ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
District & Sessions Judge
YADGIR

ಅಧಿಸೂಚನೆಯ ಪ್ರತಿಯನ್ನು ಮಾನ್ಯ ಮಹಾ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಇವರಿಗೆ ( ಪತ್ರದ ಮುಖಾಂತರ ) ಸಲ್ಲಿಸಲಾಗಿದೆ.

ಅಧಿಸೂಚನೆಯ ನಕಲು ಪ್ರತಿಯನ್ನು ಈ ಕೆಳಕಂಡವರಿಗೆ ರವಾನಿಸಲಾಗಿದೆ.

1) ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರಿಗೆ ತಮ್ಮ ಸೂಚನಾ ಫಲಕದಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲು ಕೋರಲಾಗಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬಾಗಲಕೋಟ, ಬಳ್ಳಾರಿ, ಬೀದರ, ಬೆಳಗಾವಿ, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪೂರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ ( ಮಂಗಳೂರು), ದಾವಣಗೆರೆ, ಧಾರವಾಡ, ಗದಗ, ಹಾವೇರಿ, ಕಲಬುರ್ಗಿ, ಕೊಪ್ಪಳ, ಕೊಡಗು ( ಮಡಿಕೇರಿ ), ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಉತ್ತರ ಕನ್ನಡ (ಕಾರವಾರ), ಮಂಡ್ಯ, ಕೋಲಾರ, ಹಾಸನ.

2) ಆಯುಕ್ತರು, ವಾರ್ತಾ ಮತ್ತು ಪ್ರಚಾರ ಇಲಾಖೆ ಬೆಂಗಳೂರು ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

3) ಉಪನಿರ್ದೇಶಕರು, ಜಿಲ್ಲಾ ಮತ್ತು ವಾರ್ತಾ ಇಲಾಖೆ, ಯಾದಗಿರಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ ವಿವಿಧ ಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.

4) ಈ ಜಿಲ್ಲೆಯ ಎಲ್ಲಾ ಪೀಠಾಸೀನಾಧಿಕಾರಿಗಳು ಇವರಿಗೆ ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

* * * * *

# ಬೆರಳಚ್ಚುಗಾರರ ಹುದ್ದೆಗಾಗಿ ಅರ್ಜಿ ನಮೂನೆ

ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು, ಯಾದಗಿರಿ.

ಅಧಿಸೂಚನೆ ಸಂಖ್ಯೆ : 1 / 2019, ದಿನಾಂಕ : 03.01.2019

ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸಿ ಸಹಿ ಮಾಡುವುದು

ಇವರಿಗೆ,

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
**ಯಾದಗಿರಿ.**

| | | |
|---|---|---|
| 1. | ಅಭ್ಯರ್ಥಿಯ ಹೆಸರು | |
| 2. | ತಂದೆ/ ತಾಯಿ/ಗಂಡನ ಹೆಸರು | |
| 3. | ಪೂರ್ಣ ಅಂಚೆ ವಿಳಾಸ | |
| 4. | ಹುಟ್ಟಿದ ದಿನಾಂಕ ಮತ್ತು ವಯಸ್ಸು | |
| 5. | ರಾಷ್ಟ್ರೀಯತೆ :<br>ಧರ್ಮ : | |
| 6. | ಲಿಂಗ :<br>ಪುರುಷ / ಮಹಿಳೆ | |
| 7. | ಸಾಮಾನ್ಯ ಅಭ್ಯರ್ಥಿ, ಪ.ಜಾ, ಪ.ಪಂ; ಪ್ರವರ್ಗ-1, 2-ಎ, 2-ಬಿ, 3-ಎ, 3-ಬಿ, ಗುಂಪಿಗೆ ಸೇರಿದವರೇ ? ಎಂಬ ಬಗ್ಗೆ ಆಯಾ ಪಂಗಡಗಳನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ನಮೂದಿಸಿ ಲಗತ್ತಿಸತಕ್ಕದ್ದು | |

| | | | | | |
|---|---|---|---|---|---|
| 8. | **ಒಳಮೀಸಲಾತಿ ವಿವರ :** ನೀವು ಗ್ರಾಮೀಣ ಅಭ್ಯರ್ಥಿಯೇ ನಮೂನೆ 1 ಮತ್ತು 2 ರಲ್ಲಿ ದೃಢೀಕೃತ ಪ್ರಮಾಣ ಪತ್ರಗಳ ಪ್ರತಿಗಳನ್ನು ಲಗತ್ತಿಸುವುದು | | | | |
| 9. | ಶೈಕ್ಷಣಿಕ ವಿದ್ಯಾರ್ಹತೆ ( ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು ) | ಉತ್ತೀರ್ಣ ಹೊಂದಿದ ವರ್ಷ | ಗರಿಷ್ಟ ಅಂಕಗಳು | ಪಡೆದಿರುವ ಅಂಕಗಳು | ಶೇಕಡಾವಾರು ಅಂಕಗಳು |
| ಎ. | ಎಸ್‌ಎಸ್‌ಎಲ್‌ಸಿ / ತತ್ಸಮಾನ ವಿದ್ಯಾರ್ಹತೆ | | | | |
| ಬಿ | ಪ್ರೌಢದರ್ಜೆ ಕನ್ನಡ ಬೆರಳಚ್ಚು ಪರೀಕ್ಷೆ | | | | |
| ಸಿ. | ಪ್ರೌಢ ದರ್ಜೆ ಇಂಗ್ಲೀಷ್ ಬೆರಳಚ್ಚು ಪರೀಕ್ಷೆ | | | | |
| ಡಿ. | ಗಣಕ ಯಂತ್ರ ( ಕಂಪ್ಯೂಟರ್ ) ವಿದ್ಯಾಭ್ಯಾಸ ಹೊಂದಿರುವ ಬಗ್ಗೆ ದಾಖಲಾತಿಗಳನ್ನು ಲಗತ್ತಿಸುವುದು | | | | |
| 10. | 9ನೇ ಕಾಲಂನಲ್ಲಿ ತೋರಿಸಿರುವದಕ್ಕಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದರೆ ಆ ಬಗ್ಗೆ ವಿವರಗಳು | | | | |
| 11. | ಅಭ್ಯರ್ಥಿಯ ದೂರವಾಣಿ / ಮೊಬೈಲ್ ಸಂಖ್ಯೆ | | | | |

**ಸೂಚನೆ :** ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಭರ್ತಿ ಮಾಡತಕ್ಕದ್ದು ಮತ್ತು ಯಾವ ಯಾವ ಪಂಗಡಕ್ಕೆ ಸೇರಿದವರೆಂಬುದನ್ನು ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಹಾಗೂ ಸರಿಯಾಗಿವೆ ಎಂದು ಪ್ರಮಾಣೀಕರಿಸುತ್ತೇನೆ ಮತ್ತು ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ರದ್ದುಪಡಿಸಬಹುದು ಎಂದು ಈ ಮೂಲಕ ಘೋಷಿಸುತ್ತೇನೆ.

**ದಿನಾಂಕ :**

**ಸ್ಥಳ :**

ಅಭ್ಯರ್ಥಿಯ ಸಹಿ.

# ಬೆರಳಚ್ಚು - ನಕಲುಗಾರರ ಹುದ್ದೆಗಾಗಿ ಅರ್ಜಿ ನಮೂನೆ

ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು, ಯಾದಗಿರಿ.

ಅಧಿಸೂಚನೆ ಸಂಖ್ಯೆ : 1 / 2019, ದಿನಾಂಕ : 03.01.2019

ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸಿ ಸಹಿ ಮಾಡುವುದು

**ಇವರಿಗೆ,**

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
**ಯಾದಗಿರಿ.**

| | | |
|---|---|---|
| 1. | ಅಭ್ಯರ್ಥಿಯ ಹೆಸರು | |
| 2. | ತಂದೆ/ ತಾಯಿ/ಗಂಡನ ಹೆಸರು | |
| 3. | ಪೂರ್ಣ ಅಂಚೆ ವಿಳಾಸ | |
| 4. | ಹುಟ್ಟಿದ ದಿನಾಂಕ ಮತ್ತು ವಯಸ್ಸು | |
| 5. | ರಾಷ್ಟ್ರೀಯತೆ :<br>ಧರ್ಮ : | |
| 6. | ಲಿಂಗ :<br>ಪುರುಷ / ಮಹಿಳೆ | |
| 7. | ಸಾಮಾನ್ಯ ಅಭ್ಯರ್ಥಿ, ಪ.ಜಾ, ಪ.ಪಂ; ಪ್ರವರ್ಗ-1, 2-ಎ, 2-ಬಿ, 3-ಎ, 3-ಬಿ, ಗುಂಪಿಗೆ ಸೇರಿದವರೇ ? ಎಂಬ ಬಗ್ಗೆ ಆಯಾ ಪಂಗಡಗಳನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ನಮೂದಿಸಿ ಲಗತ್ತಿಸತಕ್ಕದ್ದು | |

| | | | | | |
|---|---|---|---|---|---|
| 8. | ಒಳಮೀಸಲಾತಿ ವಿವರ :<br>ನೀವು ಗ್ರಾಮೀಣ ಅಭ್ಯರ್ಥಿಯೇ ನಮೂನೆ 1 ಮತ್ತು 2 ರಲ್ಲಿ ದೃಢೀಕೃತ ಪ್ರಮಾಣ ಪತ್ರಗಳ ಪ್ರತಿಗಳನ್ನು ಲಗತ್ತಿಸುವುದು | | | | |
| 9. | ಶೈಕ್ಷಣಿಕ ವಿದ್ಯಾರ್ಹತೆ ( ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು ) | ಉತ್ತೀರ್ಣ ಹೊಂದಿದ ವರ್ಷ | ಗರಿಷ್ಟ ಅಂಕಗಳು | ಪಡೆದಿರುವ ಅಂಕಗಳು | ಶೇಕಡಾವಾರು ಅಂಕಗಳು |
| ಎ. | ಎಸ್‌ಎಸ್‌ಎಲ್‌ಸಿ / ತತ್ಸಮಾನ ವಿದ್ಯಾರ್ಹತೆ | | | | |
| ಬಿ | ಕಿರಿಯ ದರ್ಜೆ ಕನ್ನಡ ಬೆರಳಚ್ಚು ಪರೀಕ್ಷೆ | | | | |
| ಸಿ. | ಕಿರಿಯ ದರ್ಜೆ ಇಂಗ್ಲೀಷ್ ಬೆರಳಚ್ಚು ಪರೀಕ್ಷೆ | | | | |
| ಡಿ. | ಗಣಕ ಯಂತ್ರ ( ಕಂಪ್ಯೂಟರ್ ) ವಿದ್ಯಾಭ್ಯಾಸ ಹೊಂದಿರುವ ಬಗ್ಗೆ ದಾಖಲಾತಿಗಳನ್ನು ಲಗತ್ತಿಸುವುದು | | | | |
| 10. | 9ನೇ ಕಾಲಂನಲ್ಲಿ ತೋರಿಸಿರುವದಕ್ಕಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದರೆ ಆ ಬಗ್ಗೆ ವಿವರಗಳು | | | | |
| 11. | ಅಭ್ಯರ್ಥಿಯ ದೂರವಾಣಿ / ಮೊಬೈಲ್ ಸಂಖ್ಯೆ | | | | |

**ಸೂಚನೆ** : ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಭರ್ತಿ ಮಾಡತಕ್ಕದ್ದು ಮತ್ತು ಯಾವ ಯಾವ ಪಂಗಡಕ್ಕೆ ಸೇರಿದವರೆಂಬುದನ್ನು ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಹಾಗೂ ಸರಿಯಾಗಿವೆ ಎಂದು ಪ್ರಮಾಣಿಕರಿಸುತ್ತೇನೆ ಮತ್ತು ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ರದ್ದುಪಡಿಸಬಹುದು ಎಂದು ಈ ಮೂಲಕ ಘೋಷಿಸುತ್ತೇನೆ.

**ದಿನಾಂಕ** :

**ಸ್ಥಳ** : ಅಭ್ಯರ್ಥಿಯ ಸಹಿ.